# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 925 |
| ಮಾನ್ಯ ಸದಸ್ಯರ ಹೆಸರು | ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 18-12-2018 |
| ಉತ್ತರಿಸಬೇಕಾದ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಬೀದರ್ ಜಿಲ್ಲೆಯಲ್ಲಿರುವ ಪಿ.ಹೆಚ್.ಸಿ (ಪಬ್ಲಿಕ್ ಹೆಲ್ತ ಸೆಂಟರ್)ಗಳ ಸಂಖ್ಯೆ ಎಷ್ಟು ಅವುಗಳಲ್ಲಿರುವ ವೈದ್ಯರ ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು; ವೈದ್ಯರು ಮತ್ತು ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ನೇಮಕಾತಿ ಮಾಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ; | ಬೀದರ್ ಜಿಲ್ಲೆಯಲ್ಲಿ ಒಟ್ಟು 53 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಸದರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ 56 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಹಾಗೂ 1012 ಸಿಬ್ಬಂದಿಗಳ ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 56 ವೈದ್ಯರು ಹಾಗೂ 853 ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ವೈದ್ಯರ ಹುದ್ದೆಗಳು ಖಾಲಿ ಇರುವುದಿಲ್ಲ. ಮತ್ತು 159 ಸಿಬ್ಬಂದಿಗಳ ಹುದ್ದೆಗಳು ಖಾಲಿ ಇವೆ.<br><br>ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ತೆಗೆದುಕೊಂಡ ಕ್ರಮದ ಬಗ್ಗೆ ಅನುಬಂಧದಲ್ಲಿ ನೀಡಲಾಗಿದೆ. |
| ಆ) | ಬೀದರ್ ಜಿಲ್ಲೆಗೆ ಇನ್ನೂ ಎಷ್ಟು ಪಿ.ಹೆಚ್.ಸಿ. ಗಳ ಅವಶ್ಯಕತೆ ಇದೆ? (ವಿವರ ನೀಡುವುದು) | 2011 ಗ್ರಾಮೀಣ ಜನಸಂಖ್ಯೆ: 1277348 ಇದ್ದು, ಜನಸಂಖ್ಯೆಗನುಗುಣವಾಗಿ 51 ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸ್ಥಾಪನೆಗೆ ಅವಕಾಶವಿದ್ದು, ಹಾಲಿ 53 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಹೆಚ್ಚುವರಿಯಾಗಿ 2 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. |

ಸಂಖ್ಯೆ: ಆಕುಕ 66 ಹೆಚ್‌ಎಸ್‌ಡಿ 2018

(ಶಿವಾನಂದ ಎಸ್. ಪಾಟೀಲ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

# ಅನುಬಂಧ

## ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಈ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗಿದೆ.

- ಇಲಾಖೆಯಲ್ಲಿ ಖಾಲಿ ಇರುವ 365+111=476 (ಈ ಪೈಕಿ 111–ಹೈ–ಕರ್ನಾಟಕ) ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಭರ್ತಿ ಮಾಡಲು ಕೋರಲಾಗಿತ್ತು, ಆದರೆ 457 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಅಂತಿಮ ಪಟ್ಟಿ ಪ್ರಕಟಣೆಗೊಂಡಿದ್ದು, ಆದರಲ್ಲಿ 260 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಕೌನ್ಸಿಲಿಂಗ್‌ಗೆ ಹಾಜರಾಗಿದ್ದು, ಈ ಪೈಕಿ 255 ವೈದ್ಯರು ನೇಮಕಾತಿ ಆದೇಶ ಪಡೆದು, ದಿನಾಂಕ: 04–09–2018 ರಿಂದ 230 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಪ್ರಸುತ ಕಾರ್ಯನಿರ್ವಹಿಸುತ್ತಿದ್ದಾರೆ.
- ಇಲಾಖೆಯಲ್ಲಿ ಖಾಲಿ ಇರುವ 1065 ತಜ್ಞ ವೈದ್ಯರನ್ನು ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಭರ್ತಿ ಮಾಡಲು ಕೋರಲಾಗಿತ್ತು, ಆದರೆ 382 ತಜ್ಞ ವೈದ್ಯರ ಅಂತಿಮ ಪಟ್ಟಿ ಪ್ರಕಟಣೆಗೊಂಡಿದ್ದು, ಆದರಲ್ಲಿ 265 ತಜ್ಞ ವೈದ್ಯರು ಕೌನ್ಸಿಲಿಂಗ್‌ಗೆ ಹಾಜರಾಗಿದ್ದು, ಈ ಪೈಕಿ 255 ತಜ್ಞ ವೈದ್ಯರು ನೇಮಕಾತಿ ಆದೇಶ ಪಡೆದು, ದಿನಾಂಕ: 16–07–2018 ರಿಂದ 156 ತಜ್ಞ ವೈದ್ಯರು ಪ್ರಸುತ ಕಾರ್ಯನಿರ್ವಹಿಸುತ್ತಿದ್ದಾರೆ.
- ವೈದ್ಯರ ನೇಮಕಾತಿ ಸಮಾಲೋಚನೆ ನಂತರ ಹೆಚ್ಚಿನ ವೈದ್ಯರು ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದೆ ಇರುವುದರಿಂದ ಕೆಪಿಎಸ್‌ಸಿ ಯಿಂದ ತಜ್ಞ ವೈದ್ಯರು ಮತ್ತು ಸಾ.ಕ.ವೈದ್ಯಾಧಿಕಾರಿಗಳ ಹೆಚ್ಚುವರಿ ಪಟ್ಟಿಯನ್ನು ಕಳುಹಿಸಿಕೊಡುವಂತೆ ಕರ್ನಾಟಕ ಲೋಕಸೇವಾ ಆಯೋಗಕ್ಕೆ ದಿ:01.12.2018 ರಂದು ಪತ್ರ ಬರೆಯಲಾಗಿದೆ.
- ಇಲಾಖೆಯಲ್ಲಿ ತಜ್ಞರು ಹಾಗೂ ವೈದ್ಯಾಧಿಕಾರಿಗಳ ಕೊರತೆ ಇರುವುದರಿಂದ ಎಲ್ಲಾ ಹುದ್ದೆಗಳನ್ನು ಭರ್ತಿ ಮಾಡಲು ಸಾಧ್ಯವಾಗಿರುವುದಿಲ್ಲ. ಖಾಲಿ ಇರುವ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕಾಲಕಾಲಕ್ಕೆ ಕ್ರಮ ಕೈಗೊಳ್ಳಲಾಗುತ್ತಿದೆ.
- ಖಾಲಿ ಇರುವ ತಜ್ಞ ವೈದ್ಯರನ್ನು ಎನ್.ಹೆಚ್.ಎಂ ಅಡಿಯಲ್ಲಿ ಗುತ್ತಿಗೆ ಆಧಾರದಲ್ಲಿ ಹಾಗೂ ಕರೆ ಆಧಾರದಲ್ಲಿ (on call basis) ಸಹ ನೇಮಕಾತಿ ಮಾಡಲು ಅವಕಾಶ ಕಲ್ಪಿಸಿದೆ.
- ಹಾಗೆಯೇ, ವಯೋನಿವೃತ್ತಿ ಹೊಂದಿದ ತಜ್ಞರು ಹಾಗೂ ವೈದ್ಯರನ್ನು 65 ವರ್ಷ ವಯಸ್ಸಿನವರೆಗೆ ಪ್ರತೀ ವರ್ಷ ನವೀಕರಿಸುವ ಷರತ್ತಿಗೊಳಪಟ್ಟು ಗುತ್ತಿಗೆ ಆಧಾರದಲ್ಲಿ ಮರು ನೇಮಕಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಿದೆ.
- ಎಂ.ಬಿ.ಬಿ.ಎಸ್. ಪದವಿಯನ್ನು ಸರ್ಕಾರಿ ಕೋಟಾದಲ್ಲಿ ಪೂರ್ಣಗೊಳಿಸಿದ ವೈದ್ಯರುಗಳನ್ನು ಒಂದು ವರ್ಷ ಕಡ್ಡಾಯ ಗ್ರಾಮೀಣ ಸೇವೆಯಡಿಯಲ್ಲಿ ಸೇವೆ ಸಲ್ಲಿಸಲು ನೇಮಿಸಲಾಗುತ್ತಿದೆ ಹಾಗೂ ವೈದ್ಯರುಗಳನ್ನು ಖಾಲಿ ಹುದ್ದೆಗೆ ತಾತ್ಕಾಲಿಕವಾಗಿ ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲಾಗುತ್ತಿದೆ.

- ಕಿರಿಯ ವೈದ್ಯಕೀಯ ಪ್ರಯೋಗಶಾಲಾ ಟೆಕ್ನಾಲಜಿಸ್ಟ್/ಫಾರ್ಮಾಸಿಸ್ಟ್/ ಎಲೆಕ್ಟ್ರೀಷಿಯನ್ / ಸೋಷಿಯಲ್ ವರ್ಕರ್/ಡೆಂಟಲ್ ಮೆಕ್ಯಾನಿಕ್/ ಗ್ರೂಪ್–ಡಿ ಹುದ್ದೆಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಸರ್ಕಾರದಿಂದ ಅನುಮತಿ ನೀಡಲಾಗಿದೆ.

- ಇಲಾಖೆಯ ವಿಶೇಷ ನೇರ ನೇಮಕಾತಿ ಸಮಿತಿ ಮುಖಾಂತರ 2017–18ನೇ ಸಾಲಿನಲ್ಲಿ ವಿವಿಧ ಅರೆ ವೈದ್ಯಕೀಯ ಹುದ್ದೆಗಳಲ್ಲಿ 1665 ಹುದ್ದೆಗಳನ್ನು ನೇಮಕಾತಿ ಮಾಡಿ ಆದೇಶ ಹೊರಡಿಸಲಾಗಿದೆ.

- ಕಿರಿಯ ಆರೋಗ್ಯ ಸಹಾಯಕರು (ಮಹಿಳೆ) –496 ಹುದ್ದೆಗಳಿಗೆ ಪೋಲೀಸ್ ಪೂರ್ವಾಪರ / ಜಾತಿ ಸಿಂಧುತ್ವ / ಹೈ–ಕ. ಮೀಸಲಾತಿ ಸಿಂಧುತ್ವ ವರದಿಗಳು ಸ್ವೀಕೃತವಾದ ನಂತರ ಹಂತ ಹಂತವಾಗಿ ನೇಮಕಾತಿ ಆದೇಶ ನೀಡಲಾಗುವುದು ಮತ್ತು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳು–62 ಹುದ್ದೆಗಳಿಗೆ ಹೊರ ರಾಜ್ಯದ ಆದೇಶ ನೀಡಲಾಗುವುದು ಮತ್ತು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳು–62 ಹುದ್ದೆಗಳಿಗೆ ಹೊರರಾಜ್ಯದ ವಿಶ್ವವಿದ್ಯಾನಿಲಯಗಳಿಂದ ಪದವಿ ಪಡೆದಿರುವ ಅಭ್ಯರ್ಥಿಗಳ ಅಂಕಪಟ್ಟಿಗಳ ನೈಜತೆಯ ಬಗ್ಗೆ ಪತ್ರ ಬರೆಯಲಾಗಿದ್ದು, ಸ್ಪಷ್ಟ ಮಾಹಿತಿ ಬಂದ ನಂತರ ತಾತ್ಕಾಲಿಕ ಆಯ್ಕೆಪಟ್ಟಿ ತಯಾರಿಸಲಾಗುವುದು ಹಾಗೂ 889 ಶುಶ್ರೂಷಕರ ಹುದ್ದೆಗಳನ್ನು ಭರ್ತಿ ಮಾಡಲ ಮಾನ್ಯ ಕರ್ನಾಟಕ ಆಡಳಿತ ನ್ಯಾಯಮಂಡಳಿಯಲ್ಲಿ ದಾವೆ ಹೂಡಿದ್ದು, ಸದರಿ ನ್ಯಾಯಾಲಯದಲ್ಲಿ ತಡೆಯಾಜ್ಞೆ ಆದೇಶ ಇರುವ ಹಿನ್ನೆಲೆಯಲ್ಲಿ ಅಂತಿಮ ತೀರ್ಪು ಬಂದ ನಂತರ ನೇಮಕಾತಿ ಪ್ರಕ್ರಿಯೆ ಚಾಲನೆಗೊಳಿಸಲಾಗುವುದು.

- ಇಲಾಖೆಯಲ್ಲಿ ಖಾಲಿ ಇರುವ 177 ಪ್ರಥಮ ದರ್ಜೆ ಸಹಾಯಕರು ಮತ್ತು 143 ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯ ಅನುಮೋದನೆ ದೊರೆತಿದ್ದು, ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ ಭರ್ತಿ ಮಾಡುವ ಸಲುವಾಗಿ ಪತ್ರ ಬರೆಯಲಾಗಿದೆ.